**ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ; ಕೇಂದ್ರ ಕಛೇರಿ: ಬೆಂಗಳೂರು-27**

**<u>ಪತ್ರಿಕಾ ಪ್ರಕಟಣೆ</u>**

ವಿಷಯ: ಕೆ ಎಸ್ ಆರ್ ಟಿ ಸಿ ಯ ವ್ಯವಸ್ಥಾಪಕ ನಿರ್ದೇಶಕರಾದ ಶ್ರೀ. ಶಿವಯೋಗಿ ಸಿ ಕಳಸದ ಭಾಆಸೇ, ರವರು ದರ್ಜೆ-3 ಮೇಲ್ವಿಚಾರಕೇತರ ಹುದ್ದೆಗಳಿಗೆ ಅರ್ಹರಾದ ಅಭ್ಯರ್ಥಿಗಳ ಮೂಲ ದಾಖಲಾತಿ ಮತ್ತು ದೇಹದಾರ್ಢ್ಯತೆ ಕೇಂದ್ರಕ್ಕೆ ಭೇಟಿ, ಪರಿವೀಕ್ಷಣೆ ಮತ್ತು ಅಭ್ಯರ್ಥಿಗಳೊಂದಿಗೆ ಮಾತು.

*****************

ಕೆ ಎಸ್ ಆರ್ ಟಿ ಸಿ ಯ ವ್ಯವಸ್ಥಾಪಕ ನಿರ್ದೇಶಕರಾದ ಶ್ರೀ. ಶಿವಯೋಗಿ ಸಿ ಕಳಸದ ಭಾಆಸೇ, ರವರು, ದಿನಾಂಕ: 10-01-2019 ರಂದು ಪ್ರಾರಂಭವಾಗಿರುವ ದರ್ಜೆ-3 ಮೇಲ್ವಿಚಾರಕೇತರ ಹುದ್ದೆಗಳಿಗೆ ಅರ್ಹರಾದ ಅಭ್ಯರ್ಥಿಗಳ ಮೂಲ ದಾಖಲಾತಿ ಮತ್ತು ದೇಹದಾರ್ಢ್ಯತೆ ಪರಿಶೀಲನೆ ಕಾರ್ಯವನ್ನು ಪರಿವೀಕ್ಷಿಸಿದರು.

ಒಟ್ಟು 1127 ಹುದ್ದೆಗಳಿಗೆ , 4865 ಅಭ್ಯರ್ಥಿಗಳ ದಾಖಲಾತಿ ಪರಿಶೀಲನಾ ಕಾರ್ಯವು ದಿನಾಂಕ: 10-1-2019 ರಿಂದ 24-01-2019 ರವರೆಗೆ ಕೇಂದ್ರ ಕಛೇರಿಯ ಸಭಾಂಗಣದಲ್ಲಿ ನಡೆಯುತ್ತಿದ್ದು, ಸದರಿ ಪರಿಶೀಲನಾ ತಂಡಗಳ ಪ್ರತಿಯೊಬ್ಬ ಸಿಬ್ಬಂದಿಗಳ ಕಾರ್ಯ, ಸಿಸಿಟಿವಿ ಕ್ಯಾಮೆರಾಗಳ ನಿರ್ವಹಣೆ ಮತ್ತು ದೇಹದಾರ್ಢ್ಯತೆ ಪರೀಕ್ಷಿಸುವ ಯಂತ್ರಗಳ ಪರಿಶೀಲನೆ ನಡೆಸಿದರು.

ಮುಂದುವರೆದು, ವ್ಯವಸ್ಥಾಪಕ ನಿರ್ದೇಶಕರು, ಅಭ್ಯರ್ಥಿಗಳನ್ನು ಉದ್ದೇಶಿಸಿ ಮಾತನಾಡುವ ಸಂದರ್ಭದಲ್ಲಿ, ಸಂಸ್ಥೆಯ ಬಗ್ಗೆ ಮತ್ತು ಆಯ್ಕೆ ಪ್ರಕ್ರಿಯೆ ಬಗ್ಗೆ ತಿಳಿಸುತ್ತಾ, ವೈಯಕ್ತಿಕ ಸಂದರ್ಶನ ಹಾಗೂ ಸಂದರ್ಶನಕ್ಕೆ ಅಂಕಗಳು ಇರುವುದಿಲ್ಲ. ನಿಗದಿತ ವಿದ್ಯಾರ್ಹತೆಯಲ್ಲಿ ಗಳಿಸಿದ ಶೇಕಡವಾರು ಅಂಕ ಹಾಗೂ ಸಾಮಾನ್ಯ ಸಾಮರ್ಥ್ಯ ಪರೀಕ್ಷೆ (CAT) ಯಲ್ಲಿ ಪಡೆದ ಅಂಕಗಳನ್ನು ಆಧರಿಸಿ ಮೆರಿಟ್ ಆಧಾರದ ಮೇಲೆ ನೇಮಕಾತಿ ಮಾಡುವುದರಿಂದ ಅಭ್ಯರ್ಥಿಗಳು ಯಾವುದೇ ಶಿಫಾರಸ್ಸು, ಪ್ರಭಾವ ಹಾಗೂ ಆಮಿಷಗಳಿಗೆ, ಅವ್ಯವಹಾರಗಳಿಗೆ ಒಳಗಾಗಬಾರದೆಂದು ತಿಳಿಸಿ, ಅಭ್ಯರ್ಥಿಗಳಿಗೆ ಶುಭಕೋರಿದರು.

**ಸಹಿ/-**

**ಸಾರ್ವಜನಿಕ ಸಂಪರ್ಕಾಧಿಕಾರಿ**